ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

17

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 29/12/20


### ಹೈಕೋರ್ಟ್ ಮಹತ್ವದ ಆದೇಶ | ಕರ್ತವ್ಯನಿರತ ಸಾರಿಗೆ ನೌಕರರಿಗೆ ಅನ್ವಯ

# ಹೃದಯಾಘಾತವೂ ಅಪಘಾತಕ್ಕೆ ಸಮ

■ **ವಿಕ ಸುದ್ದಿಲೋಕ** ಬೆಂಗಳೂರು

ಸಾರಿಗೆ ನೌಕರರು ಕರ್ತವ್ಯ ನಿರ್ವಹಣೆ ವೇಳೆ ಹೃದಯಘಾತದಿಂದ ಸಾವನ್ನಪ್ಪಿದರೆ ಅದನ್ನು ಅಪಘಾತವೆಂದೇ ಪರಿಗಣಿಸಬೇಕು ಎಂದು ಹೈಕೋರ್ಟ್ ಮಹತ್ವದ ಆದೇಶ ನೀಡಿದೆ.

ನ್ಯಾಯಮೂರ್ತಿ ಸುನಿಲ್ ದತ್ ಯಾದವ್ ಮತ್ತು ನ್ಯಾಯಮೂರ್ತಿ ಪಿ.ಎನ್. ದೇಸಾಯಿ ಅವರಿದ್ದ ಹೈಕೋರ್ಟ್ ಕಲಬುರಗಿ ವಿಭಾಗೀಯಪೀಠ ಇತ್ತೀಚೆಗೆ ಈ ಆದೇಶ ನೀಡಿದ್ದು, ಹೃದಯಾಘಾತ ಸಂಭವಿಸಿದರೆ ಅದನ್ನು 'ಅಪಘಾತ' ಎಂದು ವ್ಯಾಖ್ಯಾನಿಸಬಹುದು ಎಂದು ಅಭಿಪ್ರಾಯಪಟ್ಟಿದೆ.

''ಅಪಘಾತ ಎಂದರೆ ಊಹಿಸಲಾಗದ ಹಾಗೂ ಅನಿರೀಕ್ಷಿತ ಘಟನೆಯಾಗಿರುತ್ತದೆ. ಅದನ್ನು ನಿರೀಕ್ಷೆ ಅಥವಾ ಯೋಜಿಸಲಾಗುವುದಿಲ್ಲ, ಅಂತಹ ಸಂದರ್ಭದದಲ್ಲಿ ಕರ್ತವ್ಯ ಮೇಲಿದ್ದಾಗ ನೌಕರನಿಗೆ ಹೃದಯಘಾತ ಉಂಟಾದರೆ, ಅದು ಆತನ ಹೃದಯಘಾತಕ್ಕೆ ಉಂಟಾದ ಗಾಯವಾಗಿರುತ್ತದೆ. ಹಾಗಾಗಿ, ಹೃದಯಘಾತವನ್ನು ಅಪಘಾತವೆಂದೇ ಪರಿಗಣಿಸಬೇಕಾಗುತ್ತದೆ '' ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ. ಈ ಕುರಿತು ಈಶಾನ್ಯ ರಸ್ತೆ ಸಾರಿಗೆ ನಿಗಮದ (ಎನ್ಇಕೆಆರ್‌ಟಿಸಿ) ವಾದವನ್ನು ಹೈಕೋರ್ಟ್ ಸಾರಾಸಗಟಾಗಿ ತಿರಸ್ಕರಿಸಿದೆ.



- ಅಪಘಾತ ಎಂದರೆ ಊಹಿಸಲಾಗದ ಘಟನೆ
- ಪರಿಹಾರ ಕೋರಿ ಮಕ್ಕಳಿಂದ ಅರ್ಜಿ ಸಲ್ಲಿಕೆ
- ಹೃದಯಘಾತ 'ಅಪಘಾತ/ವೈಯಕ್ತಿಕ ಗಾಯ'ದ ವ್ಯಾಪ್ತಿ ಬರುವುದಿಲ್ಲ

ಎನ್ಇಕೆಆರ್‌ಟಿಸಿಯಲ್ಲಿ ಬಸ್ ಚಾಲಕನಾಗಿದ್ದ ವಿಜಯ್‌ಕುಮಾರ್‌ಗೆ 2012ರ ಸೆ.5ರಂದು ಸಂಜೆ 4.45 ಸಮಯದಲ್ಲಿ ಕಲಬುರಗಿ ಯೂನಿರ್ವಸಿಟಿ ಆವರಣದ ಬಳಿ ಬಸ್ ಚಾಲನೆ ಮಾಡುತ್ತಿದ್ದಾಗ ಹೃದಯಘಾತ ಸಂಭವಿಸಿತ್ತು. ಪರಿಣಾಮ ಆಸ್ಪತ್ರೆಗೆ ಕೊಂಡೊಯುತ್ತಿದ್ದ ವೇಳೆ ಮಾರ್ಗಮಧ್ಯೆ ಕೊನೆಯುಸಿರೆಳೆದಿದ್ದರು. ಅವರ ಪತ್ನಿ, ಮಕ್ಕಳು ಪರಿಹಾರ ಕೋರಿ ಅರ್ಜಿ ಸಲ್ಲಿಸಿದ್ದರು. ಕರ್ತವ್ಯದ್ದಾಗ ಕಾರ್ಯದೊತ್ತಡ ಮತ್ತು ಆಯಾಸದಿಂದಾಗಿ ವಿಜಯ್ ಕುಮಾರ್ ಹೃದಯಘಾತ ಸಂಭವಿಸಿ ಸಾವನ್ನಪ್ಪಿದ್ದಾರೆ ಎಂದು ವಾದಿಸಿದ್ದರು.

ವಿಚಾರಣೆ ನಡೆಸಿದ್ದ ಕಲಬುರಗಿಯ ನೌಕರರ ಪರಿಹಾರ ಆಯುಕ್ತರಾಗಿರುವ 2ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು, ಮೃತನ ಕುಟುಂಬದವರಿಗೆ ಒಟ್ಟು 21,98,090 ರೂ. ಪರಿಹಾರ ನೀಡುವಂತೆ ಎನ್ಇಕೆಆರ್‌ಟಿಸಿಗೆ 2017ರ ಏ.5ರಂದು ಆದೇಶಿಸಿತ್ತು.

ಈ ಆದೇಶ ರದ್ದು ಕೋರಿ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದ ಎನ್ಇಕೆಆರ್‌ಟಿಸಿ, ನೌಕರರ ಪರಿಹಾರ ಕಾಯಿದೆ-1923ರ ಸೆಕ್ಷನ್ 3ರ ಪ್ರಕಾರ ಹೃದಯಘಾತವು 'ಅಪಘಾತ ಅಥವಾ ವೈಯಕ್ತಿಕ ಗಾಯ'ದ ವ್ಯಾಪ್ತಿಗೆ ಬರುವುದಿಲ್ಲ, ಪರಿಹಾರ ಕಲ್ಪಿಸಬೇಕಾದರೆ ಚಾಲಕ ಕರ್ತವ್ಯ ನಿರ್ವಹಿಸುತ್ತಿದ್ದ ವೇಳೆ ಅಪಘಾತ ಸಂಭವಿಸಿ ಅಥವಾ ವೈಯಕ್ತಿಕವಾಗಿ ಗಾಯಗೊಂಡು ಸಾವನ್ನಪ್ಪಿರಬೇಕು. ಪ್ರಕರಣದಲ್ಲಿ ಒತ್ತಡ ಹಾಗೂ ಆಯಾಸದಿಂದ ವಿಜಯ್ ಕುಮಾರ್‌ಗೆ ಹೃದಯಘಾತ ಸಂಭವಿಸಿ ಸಾವನ್ನಪ್ಪಿದ್ದಾರೆ ಎಂದು ಆತನ ಕುಟುಂಬದವರು ಹೇಳಿದ್ದಾರೆ. ಆದರೆ, ಅದನ್ನು ಸಾಬೀತುಪಡಿಸುವ ದಾಖಲೆ ಒದಗಿಸಿಲ್ಲ ಎಂದು ವಾದಿಸಿತ್ತು.